# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1057(1166)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಕೊಡಗು ಜಿಲ್ಲೆಯಲ್ಲಿ ನಡೆದಿರುವ ಹುಲಿ ದಾಳಿಯ ಕುರಿತು

(ಅ) ಕೊಡಗು ಜಿಲ್ಲೆಯಲ್ಲಿ ಜನ ಹಾಗೂ ಜಾನುವಾರುಗಳ ಮೇಲೆ ಹುಲಿ ದಾಳಿಯ ಪ್ರಕರಣಗಳು ನಿರಂತರವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹುಲಿ ದಾಳಿ ತಪ್ಪಿಸಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಕೊಡಗು ಜಿಲ್ಲೆಗೆ ಹೊಂದಿಕೊಂಡಿರುವ ಅರಣ್ಯಕ್ಕೆ ರಾಜ್ಯದ ಬೇರೆ ಭಾಗದಲ್ಲಿ ಜನ ಹಾಗೂ ಜಾನುವಾರುಗಳ ಮೇಲೆ ದಾಳಿ ಮಾಡಿದ ಕಾರಣ ಸೆರೆ ಹಿಡಿದಿರುವ ನರಭಕ್ಷಕ ಹುಲಿಗಳನ್ನು ತಂದು ಬಿಟ್ಟಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ;

(ಈ) 2020-21ನೇ ಸಾಲಿನಲ್ಲಿ ಹುಲಿ ದಾಳಿಯಿಂದ ಜಿಲ್ಲೆಯಲ್ಲಿ ಆಗಿರುವ ಜೀವಹಾನಿ ಮತ್ತು ಶಾಶ್ವತ ಅಂಗವೈಕಲ್ಯತೆಯ ಪ್ರಕರಣದ ವಿವರಗಳೇನು; ಹಾಗೂ ನೀಡಿರುವ ಪರಿಹಾರಗಳೇನು? (ಪ್ರಕರಣವಾರು ಪ್ರತ್ಯೇಕ ಮಾಹಿತಿ ನೀಡುವುದು)